ಕರ್ನಾಟಕ ಸರ್ಕಾರ

**ಸಂಖ್ಯೆ:** ಪಪೂಶಿಇ/ಆವಿಎ/ವಿನಿ-5/ಉ-ವರ್ಗ/2022-23.

ನಿರ್ದೇಶಕರ ಕಚೇರಿ,
ಪದವಿ ಪೂರ್ವ ಶಿಕ್ಷಣ ಇಲಾಖೆ,
18ನೇ ಅಡ್ಡರಸ್ತೆ, ಮಲ್ಲೇಶ್ವರಂ,
ಬೆಂಗಳೂರು-56 0012
ದಿನಾಂಕ:20-07-2022

**ಜ್ಞಾಪನ**

**ವಿಷಯ**:- 2018-19ನೇ ಶೈಕ್ಷಣಿಕ ಸಾಲಿನಲ್ಲಿ **ಕಡ್ಡಾಯ ವರ್ಗಾವಣೆಗೊಂಡ** ಉಪನ್ಯಾಸಕರಿಗೆ 2022-23ನೇ ಶೈಕ್ಷಣಿಕ ಸಾಲಿನಲ್ಲಿ ವರ್ಗಾವಣೆ ಕೌನ್ಸಿಲಿಂಗ್ ನಡೆಸುವ ಬಗ್ಗೆ.

**ಉಲ್ಲೇಖ**:-
1. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 12 ಶಾಸನ 2020, ದಿನಾಂಕ: 27-03-2020.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಸಂವ್ಯಶಾಇ 47 ಶಾಸನ 2021, ದಿನಾಂಕ: 18-01-2022.
3. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಪಿ 32 ಟಿಪಿಯು 2021, ದಿನಾಂಕ: 12-05-2022.
4. ಈ ಕಚೇರಿ ಸಮಸಂಖ್ಯೆ ವರ್ಗಾವಣಾ ಮಾರ್ಗಸೂಚಿ ದಿನಾಂಕ:18-05-2022.
5. ಈ ಕಚೇರಿ ಸಮಸಂಖ್ಯೆ ಜ್ಞಾಪನ ದಿನಾಂಕ:06-07-2022.
6. ಸರ್ಕಾರಕ್ಕೆ ಸಲ್ಲಿಸಲಾದ ಏಕ ಕಡತ ಸಂಖ್ಯೆ DPUE/EST10/LTR/4/2022. ದಿನಾಂಕ: 15/07/2022.
7. ಈ ಕಚೇರಿ ಸಮಸಂಖ್ಯೆ ಜ್ಞಾಪನ ಪತ್ರ ದಿನಾಂಕ:19-07-2022

* * *

ಉಲ್ಲೇಖ-1 ರಿಂದ 5ರ ವರೆಗಿನ ಆದೇಶಗಳನ್ವಯ 2022-23ನೇ ಶೈಕ್ಷಣಿಕ ಸಾಲಿನಲ್ಲಿ, 2018-19ನೇ ಶೈಕ್ಷಣಿಕ ಸಾಲಿನಲ್ಲಿ ಕಡ್ಡಾಯ ವರ್ಗಾವಣೆಗೊಂಡ ಉಪನ್ಯಾಸಕರುಗಳಿಗೆ ಒಂದು ಬಾರಿಯ ಕ್ರಮವಾಗಿ ಎಲ್ಲಾ ವರ್ಗಾವಣೆಗಳಿಗೂ ಮೊದಲು ದಿನಾಂಕ: 07-07-2022 ರಂದು ಕೌನ್ಸಿಲಿಂಗ್ ವರ್ಗಾವಣೆ ನಡೆಸಲಾಗಿರುತ್ತದೆ. ಆದರೆ, ಕಡ್ಡಾಯ ವರ್ಗಾವಣೆಗೊಂಡ ಉಪನ್ಯಾಸಕರುಗಳಿಗೆ ಒಂದು ಬಾರಿಯ ಕ್ರಮವಾಗಿ ಆನ್‌ಲೈನ್ ಮೂಲಕ ವಿಶೇಷ ಕೌನ್ಸಿಲಿಂಗ್ ಕಡ್ಡಾಯ ವರ್ಗಾವಣೆ ನಡೆಸಿದ್ದು, ವರ್ಗಾವಣೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಹಲವಾರು ಉಪನ್ಯಾಸಕರು ಪ್ರಕಟಿಸಿಲಾಗಿದ್ದ ಖಾಲಿ ಹುದ್ದೆಗಳ ಪಟ್ಟಿಯಲ್ಲಿ ಕೆಲವು ಖಾಲಿ ಹುದ್ದೆಗಳನ್ನು ಈ ಪಟ್ಟಿಯಲ್ಲಿ ತೋರಿಸದೇ ಇರುವುದರಿಂದ, ಅಂತಹ ಹುದ್ದೆಗಳನ್ನು ವರ್ಗಾವಣೆಯಲ್ಲಿ ಆಯ್ಕೆ ಮಾಡಿಕೊಳ್ಳುವ ಅವಕಾಶ ಕೈತಪ್ಪಿದೆ ಎಂದು ಆಕ್ಷೇಪಿಸಿ ಮನವಿ ಮಾಡಿರುತ್ತಾರೆ.

ಈ ಹಿನ್ನೆಲೆಯಲ್ಲಿ, ಆಕ್ಷೇಪಿತ ಉಪನ್ಯಾಸಕರ ಮನವಿಯನ್ನು ಪರಿಗಣಿಸುವಂತೆ ಕೋರಿ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿತ್ತು. ಉಲ್ಲೇಖ-6ರಂತೆ ಸರ್ಕಾರವು ಪುನರ್ ಕೌನ್ಸಿಲಿಂಗ್ ನಡೆಸಲು ಅವಕಾಶ ನೀಡಿ ನಿರ್ದೇಶಿಸಿರುವುದರಿಂದ, ದಿನಾಂಕ: 07-07-2022 ರಂದು ನಡೆಸಲಾಗಿದ್ದ ಕೌನ್ಸಿಲಿಂಗ್ ವರ್ಗಾವಣೆಯನ್ನು ರದ್ದುಪಡಿಸಿ ಮತ್ತೊಮ್ಮೆ ನಡೆಸಲು ತೀರ್ಮಾನಿಸಿದೆ. 2018-19ನೇ ಶೈಕ್ಷಣಿಕ ಸಾಲಿನಲ್ಲಿ ಕಡ್ಡಾಯ ವರ್ಗಾವಣೆಗೊಂಡ ಉಪನ್ಯಾಸಕರಿಗೆ ಮರುಕೌನ್ಸಿಲಿಂಗ್ ನಡೆಸಲು ಪರಿಷ್ಕೃತ ವೇಳಾಪಟ್ಟಿಯನ್ನು ಈ ಕೆಳಕಂಡಂತೆ ಪ್ರಕಟಿಸಿದೆ.

2.........

| ಕ್ರಮ ಸಂಖ್ಯೆ | ವಿಷಯ | ದಿನಾಂಕ |
|---|---|---|
| 1 | ಜಿಲ್ಲಾ ಉಪ ನಿರ್ದೇಶಕರಿಂದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ವಿವಿಧ ವಿಷಯಗಳ ಉಪನ್ಯಾಸಕರ ಖಾಲಿ ಹುದ್ದೆಯ ಮಾಹಿತಿಯನ್ನು ಪರಿಶೀಲಿಸಿ ನಿರ್ದೇಶನಾಲಯಕ್ಕೆ ಸಲ್ಲಿಸಲು ನಿಗದಿಪಡಿಸಿದ ದಿನಾಂಕ ಮತ್ತು ಸಮಯ | 20-07-2022 ರಿಂದ 22-07-2022 (12-00 NOON) |
| 2 | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳ ತಾತ್ಕಾಲಿಕ ಪಟ್ಟಿ ಪ್ರಕಟಿಸುವ ದಿನಾಂಕ | 25-07-2022 |
| | ಸದರಿ ಪಟ್ಟಿಗೆ ಆಕ್ಷೇಪಣೆಯನ್ನು ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕ ಮತ್ತು ಸಮಯ | 28-07-2022 (12-00 NOON) |
| 3 | ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ವಿವಿಧ ವಿಷಯಗಳ ಉಪನ್ಯಾಸಕರ ಹುದ್ದೆಗಳ ಅಂತಿಮ ಪಟ್ಟಿ ಪ್ರಕಟಿಸುವ ದಿನಾಂಕ: | 29-07-2022 (06-00 PM) |
| 4 | 2018-19ನೇ ಶೈಕ್ಷಣಿಕ ಸಾಲಿನಲ್ಲಿ ಕಡ್ಡಾಯ ವರ್ಗಾವಣೆಗೊಂಡ ಉಪನ್ಯಾಸಕರಿಗೆ ಮರು-ಕೌನ್ಸೆಲಿಂಗ್ ದಿನಾಂಕ | 01-08-2022 @ 9 AM |

ನಿರ್ದೇಶಕರು,
ಪದವಿ ಪೂರ್ವ ಶಿಕ್ಷಣ ಇಲಾಖೆ.

<u>ಪ್ರತಿಯನ್ನು</u>:

1. ಸರ್ಕಾರದ ಅಧೀನ ಕಾರ್ಯದರ್ಶಿ, ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ, ಪದವಿ ಪೂರ್ವ ಶಿಕ್ಷಣ, ಬಹುಮಹಡಿ ಕಟ್ಟಡ, ಬೆಂಗಳೂರು.
2. ನಿರ್ದೇಶಕರು / ಜಂಟಿ ನಿರ್ದೇಶಕರು (ಆಡಳಿತ) ಇವರ ಆಪ್ತಶಾಖೆಗೆ.
3. ರಾಜ್ಯದ ಎಲ್ಲಾ ಜಿಲ್ಲಾ ಉಪನಿರ್ದೇಶಕರುಗಳಿಗೆ – ಅಗತ್ಯ ಕ್ರಮಕ್ಕಾಗಿ.
4. ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರುಗಳಿಗೆ – ಮಾಹಿತಿಗಾಗಿ.
5. 2018-19ನೇ ಶೈಕ್ಷಣಿಕ ಸಾಲಿನಲ್ಲಿ ಕಡ್ಡಾಯ ವರ್ಗಾವಣೆಗೊಂಡು 2022-23ನೇ ಸಾಲಿನ ವರ್ಗಾವಣೆಗೆ ಅರ್ಜಿ ಸಲ್ಲಿಸಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರುಗಳಿಗೆ.
6. ಕಚೇರಿ/ಹೆಚ್ಚುವರಿ ಪ್ರತಿ.